# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **1176**

ಉತ್ತರಿಸಬೇಕಾದ ದಿನಾಂಕ : 21.08.2025

ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| | | |
|---|---|---|
| ಅ | ಹುಬ್ಬಳ್ಳಿ ಬೆಳಗಾವಿ ಜಿಲ್ಲೆಗಳಲ್ಲಿರುವ ಅಂತರ್‌ರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂಗಳಲ್ಲಿ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹುಬ್ಬಳ್ಳಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಕ್ರಿಕೆಟ್ ಕ್ರೀಡಾಂಗಣಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸೇರಿರುವುದಿಲ್ಲ. ಸದರಿ ಕ್ರೀಡಾಂಗಣಗಳು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ಸೇರಿರುತ್ತವೆ. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯು ಕರ್ನಾಟಕ ಸಂಘ ಸಂಸ್ಥೆಗಳ ಕಾಯ್ದೆ 1960ರಡಿ ನೊಂದಾಯಿತವಾದ ಸ್ವಾಯತ್ತ ಕ್ರೀಡಾ ಸಂಸ್ಥೆಯಾಗಿದ್ದು, ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಗೆ ಸಂಯೋಜಿತವಾಗಿದೆ. |
| ಆ | ಸದರಿ ಸ್ಟೇಡಿಯಂಗಳನ್ನು ಸರಿಯಾದ ನಿರ್ವಹಣೆ ಮಾಡದೇ ನಿರ್ಲಕ್ಷಿಸುತ್ತಿರುವುದಕ್ಕೆ ಕಾರಣವೇನು; | ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯು ಸಮರ್ಪಕವಾಗಿ ಕ್ರೀಡಾಂಗಣಗಳನ್ನು ನಿರ್ವಹಣೆ ಮಾಡುತ್ತಿದ್ದು, ಹುಬ್ಬಳ್ಳಿ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಕ್ರಿಕೆಟ್ ಸ್ಟೇಡಿಯಂಗಳನ್ನು ವಿಶ್ವ ದರ್ಜೆಯ ಅತ್ಯಾಧುನಿಕ ಸವಲತ್ತುಗಳನ್ನು ಹೊಂದಿರುವ ಕ್ರೀಡಾಂಗಣಗಳನ್ನಾಗಿ ಮಾಡಲು ಪ್ರಯತ್ನ ಮಾಡಲಾಗುತ್ತಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ರವರು ತಿಳಿಸಿರುತ್ತಾರೆ. |
| ಇ | ಸದರಿ ಜಿಲ್ಲೆಗಳಲ್ಲಿರುವ ಸ್ಟೇಡಿಯಂಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಿ ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ ಪಂದ್ಯಾವಳಿಗಳನ್ನು ಆಯೋಜಿಸಿ ಉತ್ತರ ಕರ್ನಾಟಕ ಭಾಗದ ಯುವ ಗ್ರಾಮೀಣ ಕ್ರೀಡಾಪಟುಗಳನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸದರಿ ಕ್ರೀಡಾಂಗಣಗಳಲ್ಲಿ ರಣಜಿ ಪಂದ್ಯಾವಳಿ, ಭಾರತ "ಎ" ಪಂದ್ಯಾವಳಿಗಳನ್ನು ಆಯೋಜಿಸಿ ಪಂದ್ಯಗಳನ್ನು ನಡೆಸಲಾಗುತ್ತಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯವರು ತಿಳಿಸಿರುತ್ತಾರೆ |

**ಸಂಖ್ಯೆ: ವೈಎಸ್‌ಡಿ-ಇಬಿಬಿ/116/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ